**12. ಪ್ರತಿ ಜಿಲ್ಲೆಯಲ್ಲೂ ಕೇಂದ್ರ ತೆರೆಯಲು ಸಚಿವರ ಸಭೆಯಲ್ಲಿ ನಿರ್ಧಾರ ಎರಡು ಪರೀಕ್ಷಾ ಕೇಂದ್ರ ಸ್ಥಾಪನೆ**

ಕೋವಿಡ್–19 ಪರೀಕ್ಷೆಯನ್ನು ಇನ್ನಷ್ಟು ತ್ವರಿತಗೊಳಿಸುವ ಸಲುವಾಗಿ ಪ್ರತಿ ಜಿಲ್ಲೆಯಲ್ಲಿ ಎರಡು ಪ್ರಯೋಗಾಲಯ ಸ್ಥಾಪಿಸಲು ಮತ್ತು ಜಿಲ್ಲಾವಾರು ವೈಜ್ಞಾನಿಕ ಕಾರ್ಯಪಡೆ ರಚಿಸಲು ತೀರ್ಮಾನಿಸಲಾಗಿದೆ. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ ವಿವಿಧ ವೈದ್ಯಕೀಯ ಸಂಘ ಸಂಸ್ಥೆಗಳೊಂದಿಗೆ ವಿಡಿಯೋ ಸಂವಾದ ನಡೆಸಿದ ಬಳಿಕ ಈ ನಿರ್ಧಾರಕ್ಕೆ ಬರಲಾಯಿತು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ: ಕೆ.ಸುಧಾಕರ್ ಅವರು ಹೇಳಿದ್ದಾರೆ.

ಕೊರೊನಾ ಸೋಂಕು ವೈದ್ಯರಿಗೆ ಹರಡುವ ಭೀತಿ ಇರುವುದರಿಂದ ದಂತ ವೈದ್ಯಕೀಯ ಕ್ಲಿನಿಕ್‌ಗಳನ್ನು ತೆರೆಯಲು ಸದ್ಯ ಅವಕಾಶ ನೀಡುವುದಿಲ್ಲ. ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು. ಪ್ರತಿದಿನ ಕೋವಿಡ್ ಮಾಹಿತಿಗಳನ್ನು ವಿಶ್ಲೇಷಣೆ ನಡೆಸಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಲಹೆ ನೀಡಲು ಡಾ: ಎಂ.ಕೆ.ಸುದರ್ಶನ್ ಅಧ್ಯಕ್ಷತೆಯ ಸಮಿತಿಯೊಂದನ್ನು ರಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಕೊರೊನಾ ಸಹಾಯ ವೇದಿಕೆ:– ಕೊರೊನಾ ಕುರಿತು ಜನರಿಗೆ ಸರಿಯಾದ ಮಾಹಿತಿ ಲಭಿಸುವಂತಾಗಬೇಕು ಎಂಬ ಕಾರಣಕ್ಕೆ ಸರ್ಕಾರವು ವ್ಯಾಟ್ಸ್‌ಆ್ಯಪ್ ಸಹಯೋಗದೊಂದಿಗೆ ಸಹಾಯ ವೇದಿಕೆ ಆರಂಭಿಸಿದೆ. 8750971717 ಇಲ್ಲಿಗೆ 'ಹಾಯ್' ಎಂದು ಸಂದೇಶ ಕಳುಹಿಸಿದರೆ ರಾಜ್ಯದಲ್ಲಿ ಕೊರೋನಾ ಕುರಿತ ಇತ್ತೀಚಿನ ಮಾಹಿತಿ ಲಭಿಸಲಿದೆ.

ತ್ವರಿತ ಪರೀಕ್ಷೆ ನಡೆಸುವ ಕಿಟ್ ನಗರಕ್ಕೆ ಬರಬೇಕಿದ್ದು, ಚೀನಾ ರಫ್ತು ನಿಯಮಗಳಲ್ಲಿ ಕೆಲವೊಂದು ಬದಲಾವಣೆ ಮಾಡಿರುವುದರಿಂದ ಕಿಟ್‌ಗಳು ಬರುವುದು ಒಂದು ವಾರದಷ್ಟು ವಿಳಂಬವಾಗಲಿದೆ ಎಂದು ಸಚಿವ ಎಸ್ ಸುರೇಶ್ ಕುಮಾರ್ ತಿಳಿಸಿದರು.

ಆಧಾರ:ಪ್ರಜಾವಾಣಿ, ದಿನಾಂಕ: 14.04.2020